ಕರ್ನಾಟಕ ಸರ್ಕಾರ

ಸಾರ್ವಜನಿಕ ಶಿಕ್ಷಣ ಇಲಾಖೆ ಆಯುಕ್ತರ ಕಛೇರಿ, ನೃಪತುಂಗ ರಸ್ತೆ, ಬೆಂಗಳೂರು – 560001

ಸಂಖ್ಯೆ:ಸಿ7(2)ಪ್ರಾ.ಶಿ.ಅ./ಶಾ.ಮ.ಲೈ.ಕಿ.40/2014–15 ದಿನಾಂಕ:26.09.2014

**: :ಸುತ್ತೋಲೆ: :**

ವಿಷಯ: ರಾಜ್ಯದ ಸರ್ಕಾರಿ ಮತ್ತು ಖಾಸಗಿ ಪ್ರಾಥಮಿಕ ಮತ್ತು ಪ್ರೌಢಶಾಲೆಗಳಲ್ಲಿ ಮಕ್ಕಳ ಸುರಕ್ಷತೆಯ ಬಗ್ಗೆ.

ಉಲ್ಲೇಖ: 1) ರಾಜ್ಯ ಉಚ್ಚ ನ್ಯಾಯಾಲಯ ರಿ.ಪಿ.ಸಂಖ್ಯೆ:41196–208/2014 ದಿ:17.09.2014 ರ ತೀರ್ಪು.

2)ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ರವರ ಸುತ್ತೋಲೆ ಸಂಖ್ಯೆ ಸಿ7(2) ಪ್ರಾಶಿಅ.ಲೈ.ಕಿ40/2014–15 ದಿ:23.07.2014.

3)ಬೆಂಗಳೂರು ನಗರ ಪೋಲಿಸ್ ಆಯುಕ್ತರು, ಇನ್‌ಫೆಂಟ್ರಿ ರಸ್ತೆ, ಬೆಂಗಳೂರು ರವರ ಆದೇಶ ಸಂಖ್ಯೆ: 157ಎಂಎಜಿ(1) ಇತರೆ/2014 ದಿ:26.07.2014

***********

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ರಾಜ್ಯದ ಶಾಲಾ ಮಕ್ಕಳ ಮೇಲೆ ಇತ್ತೀಚಿನ ದಿನಗಳಲ್ಲಿ ಲೈಂಗಿಕ ಕಿರುಕುಳದಂತಹ ಪ್ರಕರಣಗಳು ಹೆಚ್ಚಾಗಿದ್ದು, ಈ ಕುರಿತು ಮಾಧ್ಯಮಗಳಲ್ಲಿ ವರದಿಗಳು ಬರುತ್ತಿವೆ. ಸಾರ್ವಜನಿಕರು, ಮಕ್ಕಳ ಪೋಷಕರು ಈ ಬಗ್ಗೆ ತುಂಬಾ ಆತಂಕ ಪಡುತ್ತಿದ್ದು, ಮಕ್ಕಳ ಸುರಕ್ಷತೆಯನ್ನು ಮಾಡುವುದು ಇಲಾಖೆಯ ಹಾಗೂ ಶಾಲೆಯ ಆದ್ಯ ಕರ್ತವ್ಯವಾಗಿದೆ. ಈ ಹಿನ್ನೆಲೆಯಲ್ಲಿ ಉಲ್ಲೇಖ(2)ರಲ್ಲಿ ಈಗಾಗಲೇ ಮಕ್ಕಳ ಸುರಕ್ಷತೆಯ ಕುರಿತು ಸಮಗ್ರವಾದ ಸುತ್ತೋಲೆಯನ್ನು ಹೊರಡಿಸಿ ಅಗತ್ಯ ಕ್ರಮ ಕೈಗೊಳ್ಳಲು ರಾಜ್ಯದ ಎಲ್ಲಾ ಖಾಸಗಿ ಸಂಸ್ಥೆಗಳ ಆಡಳಿತ ಮಂಡಳಿಗಳಿಗೆ ತಿಳಿಸಲಾಗಿತ್ತು.

ಹಾಗೆಯೇ ಉಲ್ಲೇಖ (3) ರಲ್ಲಿ ಬೆಂಗಳೂರು ನಗರ ಪೋಲಿಸ್ ಆಯುಕ್ತರು, ಬೆಂಗಳೂರು ನಗರ ವ್ಯಾಪ್ತಿಯ ಖಾಸಗಿ ಶಾಲೆಗಳಲ್ಲಿ ಮಕ್ಕಳ ಸುರಕ್ಷತೆಯ ಕುರಿತು ಶಾಲಾ ಆಡಳಿತ ಮಂಡಳಿಗಳು ಅಳವಡಿಸಿಕೊಳ್ಳಬೇಕಾದ ಕ್ರಮದ ಬಗ್ಗೆ ಆದೇಶವನ್ನು ಹೊರಡಿಸಿ ದಿ: 31.08.2014 ರೊಳಗಾಗಿ ಅನುಷ್ಠಾನಗೊಳಿಸಬೇಕೆಂದು ಆದೇಶಿಸಿರುತ್ತಾರೆ.

ಏತನ್ಮಧ್ಯೆ, ಉಲ್ಲೇಖ(3)ರ ಸುತ್ತೋಲೆಯನ್ನು ಪ್ರಶ್ನಿಸಿ ಖಾಸಗಿ ಶಾಲಾ ಆಡಳಿತ ಮಂಡಳಿಗಳ ಸಂಘವು ಘನ ಉಚ್ಚ ನ್ಯಾಯಾಲಯದಲ್ಲಿ ದಾವೆ ಹೂಡಿದ್ದು (ರಿಟ್ ಪಿಟಿಷನ್: 41196–41208/2014) ಪ್ರಕರಣವು ದಿ:17.09.2014 ರಂದು ವಿಚಾರಣೆಗೆ ಬಂದ ಸಂದರ್ಭದಲ್ಲಿ ಘನ ನ್ಯಾಯಾಲಯವು ಮಕ್ಕಳ ಸುರಕ್ಷಾ ಕ್ರಮವನ್ನು ಖಾಸಗಿ ಅನುದಾನರಹಿತ ಶಾಲೆಗಳ ಜೊತೆಗೆ ಅನುದಾನಿತ ಹಾಗೂ ಸರ್ಕಾರಿ ಶಾಲೆಗಳಲ್ಲಿಯೂ ಸಹ ಅಳವಡಿಸಿಕೊಳ್ಳುವಂತೆ ಆದೇಶಿಸಿದೆ.

ಉಲ್ಲೇಖ(2) ರ ಸುತ್ತೋಲೆಯಲ್ಲಿ ರಾಜ್ಯದ ಎಲ್ಲಾ ಶಾಲೆಗಳ ಮಕ್ಕಳ ಸುರಕ್ಷತೆಯ ಬಗ್ಗೆ ಪ್ರಸ್ತಾಪಿಸಲಾಗಿತ್ತು. ಇದೀಗ ಸರ್ಕಾರಿ ಶಾಲಾ ಮಕ್ಕಳಿಗೆ ಹಾಗೂ ಮಕ್ಕಳ ಪೋಷಕರಿಗೆ ಗುರುತಿನ ಚೀಟಿಯನ್ನು 6 ವಾರಗಳಲ್ಲಿ ವಿತರಿಸಲು ಪ್ರಸ್ತಾಪಿತ ಪ್ರಕರಣದಲ್ಲಿ ಘನ ನ್ಯಾಯಾಲಯವು ಆದೇಶಿಸಿರುವುದರಿಂದ ಈ ಸಂಬಂಧ ಜಿಲ್ಲಾ ಉಪನಿರ್ದೇಶಕರು ಸಂಬಂಧ ಪಟ್ಟ ಎಲ್ಲಾ ಕ್ಷೇತ್ರಶಿಕ್ಷಣಾಧಿಕಾರಿಗಳಿಗೆ ಹಾಗೂ ಶಾಲಾ ಮುಖ್ಯಸ್ಥರಿಗೆ ತ್ವರಿತವಾಗಿ ಅಗತ್ಯ ನಿರ್ದೇಶನ ನೀಡುವುದು ಮತ್ತು ಅನುಸರಣೆ ಸಂಬಂಧ ನಿಗಾ ವಹಿಸುವುದು.

ಮುಂದುವರಿದು ಖಾಸಗಿ ಅನುದಾನರಹಿತ ಮತ್ತು ಅನುದಾನಸಹಿತ ಶಾಲೆಗಳಲ್ಲಿಯೂ ಸುರಕ್ಷತಾ ಕ್ರಮಗಳನ್ನು ದಿ:31.10.2014 ರೊಳಗಾಗಿ ಅಳವಡಿಸಿಕೊಳ್ಳಲು ಘನ ನ್ಯಾಯಾಲಯವು ಆದೇಶಿಸಿದೆ. ನ್ಯಾಯಾಲಯದ ಆದೇಶವು ಸಮಗ್ರವಾಗಿ ಅನುಷ್ಠಾನವಾಗಬೇಕಾಗಿದೆ. ತಪ್ಪಿದಲ್ಲಿ ನ್ಯಾಯಾಲಯದ ನಿಂದನೆ ಪ್ರಕರಣಗಳು ಎದುರಾಗುವ ಸಾಧ್ಯತೆಯಿದ್ದು, ಇಲಾಖೆಯು ಮುಜುಗರ ಅನುಭವಿಸುವ ಪ್ರಸಂಗ ಎದುರಾಗಬಹುದು. ಪ್ರಯುಕ್ತ ಶಾಲೆಗಳಲ್ಲಿ ಎಲ್ಲಾ ರೀತಿಯ ಸುರಕ್ಷತಾ ಕ್ರಮಗಳು ಜಾರಿಯಾಗತಕ್ಕದ್ದು. ಮತ್ತು ಆದೇಶ ಪಾಲಿಸದ ಶಾಲೆಗಳ ವಿರುದ್ಧ ಜಿಲ್ಲಾ ಉಪನಿರ್ದೇಶಕರು ಹಾಗೂ ತಾಲ್ಲೂಕು ಕ್ಷೇತ್ರ ಶಿಕ್ಷಣಾಧಿಕಾರಗಳು ಕರ್ನಾಟಕ ಶಿಕ್ಷಣ ಕಾಯಿದೆ ನಿಯಮಾವಳಿಗಳಂತೆ ಅಗತ್ಯ ಕ್ರಮ ವಹಿಸುವುದು.

----2

ಈಗಾಗಲೇ ರಾಜ್ಯದ ಎಲ್ಲಾ ಜಿಲ್ಲಾಧಿಕಾರಿಗಳಿಗೆ ಮತ್ತು ರಾಜ್ಯದ ಎಲ್ಲಾ ಪೋಲಿಸ್ ವರಿಷ್ಠಾಧಿಕಾರಿಗಳಿಗೆ ಉಲ್ಲೇಖ(2) ರ ಸುತ್ತೋಲೆಯನ್ನು ಕಳುಹಿಸಲಾಗಿದ್ದು, ಸದರಿ ಸುತ್ತೋಲೆಯನ್ವಯ ಜಿಲ್ಲಾಡಳಿತವು ಅಗತ್ಯ ಕ್ರಮ ವಹಿಸಬೇಕಾಗಿದೆ. ಅಲ್ಲದೇ ಈ ಸಂಬಂಧ ಎಲ್ಲಾ ಸರ್ಕಾರಿ ಮತ್ತು ಖಾಸಗಿ ಶಾಲೆಗಳಲ್ಲಿ ಸುರಕ್ಷತಾ ಕ್ರಮಗಳನ್ನು ಅನುಸರಿಸಲಾಗಿರುವ ಬಗ್ಗೆ ಪರಿಶೀಲಿಸಿ ಅಗತ್ಯ ಕ್ರಮ ವಹಿಸಲು ಕೋರಿದೆ.

ರಾಜ್ಯದ ಎಲ್ಲಾ ಶಾಲಾ ಮಕ್ಕಳ ಸುರಕ್ಷತೆಯನ್ನು ಕಾಯುವಲ್ಲಿ ಇಲಾಖೆಯು ಜಿಲ್ಲಾ ಆಡಳಿತದ ಹಾಗೂ ಪೋಲಿಸ್ ಇಲಾಖೆಯ ಸಹಕಾರವನ್ನು ಕೋರುತ್ತದೆ.

ಆಯುಕ್ತರು
ಸಾರ್ವಜನಿಕ ಶಿಕ್ಷಣ ಇಲಾಖೆ

ಗೆ;

1. ರಾಜ್ಯದ ಎಲ್ಲಾ ಜಿಲ್ಲಾಧಿಕಾರಿಗಳಿಗೆ ಮಾಹಿತಿಗಾಗಿ ಹಾಗೂ ಮುಂದಿನ ಸೂಕ್ತ ಕ್ರಮಕ್ಕಾಗಿ.
2. ರಾಜ್ಯದ ಎಲ್ಲಾ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಿಗೆ ಮಾಹಿತಿಗಾಗಿ ಹಾಗೂ ಮುಂದಿನ ಸೂಕ್ತ ಕ್ರಮಕ್ಕಾಗಿ.
3. ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳಿಗೆ ಮುಂದಿನ ಕ್ರಮಕ್ಕಾಗಿ.
4. ಅಪರ ಅಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಗುಲ್ಬರ್ಗಾ ಮತ್ತು ಧಾರವಾಡ ವಿಭಾಗ ಇವರಿಗೆ ಕಳುಹಿಸುತ್ತಾ ಅಗತ್ಯ ಕ್ರಮವಹಿಸಲು ಸೂಚಿಸಿದೆ.
5. ಸಹ ನಿರ್ದೇಶಕರು, ಬೆಂಗಳೂರು ಮತ್ತು ಮೈಸೂರು ವಿಭಾಗ ರವರಿಗೆ ಕಳುಹಿಸುತ್ತಾ ತಮ್ಮ ವ್ಯಾಪ್ತಿಯ ಜಿಲ್ಲೆಗಳಲ್ಲಿ ಈ ಬಗ್ಗೆ ಪರಿಶೀಲಿಸಲು ತಿಳಿಸಿದೆ.
6. ರಾಜ್ಯದ ಎಲ್ಲಾ ಉಪನಿರ್ದೇಶಕರು(ಆಡಳಿತ), ಸಾರ್ವಜನಿಕ ಶಿಕ್ಷಣ ಇಲಾಖೆ ಮುಂದಿನ ಕ್ರಮಕ್ಕಾಗಿ.
7. ರಾಜ್ಯದ ಎಲ್ಲಾ ಉಪನಿರ್ದೇಶಕರು(ಅಭಿವೃದ್ಧಿ), ಸಾರ್ವಜನಿಕ ಶಿಕ್ಷಣ ಇಲಾಖೆ ರವರಿಗೆ ಮುಂದಿನ ಕ್ರಮಕ್ಕಾಗಿ.
8. ರಾಜ್ಯದ ಎಲ್ಲಾ ಉಪನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ರವರಿಗೆ ಮುಂದಿನ ಕ್ರಮಕ್ಕಾಗಿ.
9. ರಾಜ್ಯದ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳು, ಸಾರ್ವಜನಿಕ ಶಿಕ್ಷಣ ಇಲಾಖೆ, ರವರಿಗೆ ಉಪನಿರ್ದೇಶಕರು(ಆಡಳಿತ) ರವರ ಮುಖಾಂತರ ಮುಂದಿನ ಕ್ರಮಕ್ಕಾಗಿ.
10. ಕಛೇರಿ ಪ್ರತಿ.